# ಕರ್ನಾಟಕ ಸರ್ಕಾರದ ನಡವಳಿ

ವಿಷಯ : ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆಯ ಘಟಕ ವೆಚ್ಚ ರೂ.1.50ಲಕ್ಷಗಳಿಂದ ರೂ.2.00ಲಕ್ಷಗಳಿಗೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ :
1) ಸರ್ಕಾರದ ಆದೇಶ ಸಂಖ್ಯೆ ಸಕಇ 152 ಎಸ್‌ಡಿಸಿ 2002 ದಿನಾಂಕ 06-06-2002
2) ಸರ್ಕಾರದ ಆದೇಶ ಸಂಖ್ಯೆ ಸಕಇ 48 ಎಸ್‌ಡಿಸಿ 2008 ದಿನಾಂಕ 12-11-2010.
3) ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ: ದೇಹಿನಿ/ಗಂಕ/ವೈಕೊಬಾ/ಘವೆ/ಸಿಆರ್/2013-14,ದಿ: 31/07/2013.

* * *

## ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿನಿಗಮ, ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆಬಾವಿಗಳ ಘಟಕವೆಚ್ಚವನ್ನು ರೂ. 75,000/- ದಿಂದ 1.00 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಇದರಲ್ಲಿ ಸಹಾಯಧನ ರೂ. 86,000/- ಮತ್ತು ಉಳಿದ ರೂ.14,000/- ಸಾಲದ ರೂಪದಲ್ಲಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಡಾ:ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ವೈಯಕ್ತಿಕ ನೀರಾವರಿ ಕೊಳವೆಬಾವಿ/ತೆರೆದ ಬಾವಿಗಳ ಘಟಕವೆಚ್ಚವನ್ನು ರೂ. 86,000/- ದಿಂದ ರೂ. 1.00 ಲಕ್ಷಕ್ಕೆ ಹೆಚ್ಚಿಸಲು ಮತ್ತು ಸಾಲವನ್ನು ರೂ.50,000/- ವರೆಗೆ ಅಥವಾ ಸಹಾಯಧನಕ್ಕಿಂತ ಹೆಚ್ಚಿಗೆ ತಗಲುವ ವೆಚ್ಚವನ್ನು ಎರಡರಲ್ಲಿ ಯಾವುದು ಕಡಿಮೆಯೋ ಅದನ್ನು ಸಂಬಂಧಪಟ್ಟ ನಿಗಮಗಳಿಂದ ನೀಡಲು ಆದೇಶಿಸಿದೆ.

2013-14ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 282ರಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆಯ ಘಟಕ ವೆಚ್ಚ ರೂ.1.50ಲಕ್ಷಗಳಿಂದ ರೂ.2.00ಲಕ್ಷಗಳಿಗೆ ಹೆಚ್ಚಿಸಲು ಘೋಷಿಸಲಾಗಿದೆ.

ಅದರಂತೆ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಉದ್ದೇಶದಿಂದ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆಯಲ್ಲಿ ಘಟಕ ವೆಚ್ಚ ರೂ.1.50ಲಕ್ಷಗಳಿಂದ ರೂ.2.00ಲಕ್ಷಗಳಿಗೆ (ರೂ.1.50ಲಕ್ಷಗಳ ಸಹಾಯಧನ ಹಾಗೂ ರೂ.0.50 ಲಕ್ಷ ಸಾಲ) ಹೆಚ್ಚಿಸಲು ಆದೇಶ ಹೊರಡಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

..2..

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 403 ಬಿಎಂಎಸ್ 2013, ಬೆಂಗಳೂರು, ದಿನಾಂಕ:31.08.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆಯ ಘಟಕ ವೆಚ್ಚವನ್ನು ರೂ.1.50ಲಕ್ಷಗಳಿಂದ ರೂ.2.00ಲಕ್ಷಗಳಿಗೆ (ರೂ.1.50 ಲಕ್ಷ ಸಹಾಯಧನ ಹಾಗೂ ರೂ.0.50 ಲಕ್ಷ ಸಾಲ) ಹೆಚ್ಚಿಸಿ ಆದೇಶಿಸಿದೆ.

ಇದಕ್ಕೆ ತಗಲುವ ವೆಚ್ಚವನ್ನು 2013-14ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 2225-03-102-0-10(ಯೋಜನೆ)ರಡಿಯಲ್ಲಿ ಭರಿಸತಕ್ಕದ್ದು.

ಈ ಮೇಲಿನ ಅಂಶಗಳನ್ನು ಹೊರತುಪಡಿಸಿ ಗಂಗಾ ಕಲ್ಯಾಣ ಯೋಜನೆಯ ಇತರೆ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 584 ವೆಚ್ಚ-2/13, ದಿನಾಂಕ:31.08.2013 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ದಿನಾಂಕ:31.08.2013ರಂದು ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಏಕ ಗವಾಕ್ಷಿ ಸಭೆಯಲ್ಲಿ ಮೇಲಿನ ಯೋಜನೆಗೆ ಸಹಮತಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನ ಸೌಧ, ಬೆಂಗಳೂರು
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
5. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ನಿ. ಬೆಂ.
6. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿವರ ಆಪ್ತಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
8. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ.